ಎಲ್.ಎ.ಸಿ.ಸಂಖ್ಯೆ:81/2017
ಪಿ ಡಬ್ಲೂಃ 1

ದಿನಾಂಕ: *14.03.2025* ರ ಆದೇಶದ ಮೇರೆಗೆ ಸಾಕ್ಷಿಯನ್ನು ಪುನಃ ಕರೆಯಿಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

<u>ಮುಂದುವರೆದ ಮುಖ್ಯ ವಿಚಾರಣೆಃ ಶ್ರೀ ಬಿ ಪಿ ಆರ್ ವಕೀಲರಿಂದ ಅರ್ಜಿದಾರರ ಪರವಾಗಿಃ</u>

*2.* ತರೀಕೆರೆ ಪುರಸಭೆಯ ಮುಖ್ಯಾಧಿಕಾರಿಗಳು ದಿನಾಂಕಃ *04/11/2024* ರಂದು ನೀಡಿರುವ ದೃಢೀಕರಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ.*1* ಎಂದು ಗುರುತಿಸಲಾಯಿತು. ಭದ್ರಾ ಮೇಲ್ದಂಡೆ ಯೋಜನೆ-2 ರ ಕಾಮಗಾರಿಯ ಹಳಿಯೂರು ಗ್ರಾಮದ 74.02 ಎಕರೆ ಪ್ರದೇಶದ ಐತೀರ್ಪಿನ ದೃಢೀಕೃತ ಪ್ರತಿಯನ್ನು ನಿಪಿ.2 ಎಂದು ಗುರುತಿಸಲಾಯಿತು. ತರೀಕೆರೆ ಪುರಸಭೆಯ ಮುಖ್ಯಾಧಿಕಾರಿಗಳು ದೃಢೀಕರಿಸಿ ನೀಡಿರುವ ನಕ್ಷೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.*3* ಎಂದು ಗುರುತಿಸಲಾಯಿತು.

3. ದಿನಾಂಕಃ 23-08-2012 ರಂದು ಭೂ ಸ್ವಾಧೀನ ಕಾಯ್ದೆ ಕಲಂ.4(1) ರ ಅಡಿಯಲ್ಲಿ ಹೊರಡಿಸಲಾದ ಅಧಿಸೂಚನೆಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.4 ಎಂದು ಗುರುತಿಸಲಾಯಿತು. ದಿನಾಂಕಃ 17-10-2013 ರಂದು ಭೂ ಸ್ವಾಧೀನ ಕಾಯ್ದೆ ಕಲಂ.6(1) ರ ಅಡಿಯಲ್ಲಿ ಹೊರಡಿಸಲಾದ ಅಧಿಸೂಚನೆಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.5 ಎಂದು ಗುರುತಿಸಲಾಯಿತು. ದಿನಾಂಕಃ 11-03-2014 ರಂದು ನೀಡಲಾದ ನೋಟೀಸಿನ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.6 ಎಂದು ಗುರುತಿಸಲಾಯಿತು.

4. ಭದ್ರಾ ಮೇಲ್ದಂಡೆ ಯೋಜನೆ-2 ರ ಕಾಮಗಾರಿಯ ಜಂಟಿ ಅಳತೆ ತಃಖೆಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.7 ಎಂದು ಗುರುತಿಸಲಾಯಿತು. ದಿನಾಂಕಃ13-08-2015 ರ ಐತೀರ್ಪಿನ ತಿಳುವಳಿಕೆಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.8 ಎಂದು

ಗುರುತಿಸಲಾಯಿತು. ಕೊಡುಗೆಯ ಮುಖಪುಟದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.9 ಎಂದು ಗುರುತಿಸಲಾಯಿತು. ಎರಡು ಪ್ರಪತ್ರಗಳ ದೃಢೀಕೃತ ಪ್ರತಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿ.ಪಿ.10 ಮತ್ತು 11 ಎಂದು ಗುರುತಿಸಲಾಯಿತು.

ಪಾಟೀ ಸವಾಲು:

(ಎದುರುದಾರರ ಪರ ವಕೀಲರ ಕೋರಿಕೆ ಮೇರೆಗೆ ಸಾಕ್ಷಿಯ ಪಾಟೀ ಸವಾಲನ್ನು ಮುಂದೂಡಲಾಯಿತು)

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸ.ಇ.ಎ.ಒ.

ಸಹಿ/-
(ಭಾನುಮತಿ ಬಿ.ಸಿ)
1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕಮಗಳೂರು.

ಸಾಕ್ಷಿಯ ಸಹಿ